**Akashvani : Bangalore**
**Regional Bulletin In Kannada**
**08.03.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

**೧. ಕಲ್ಯಾಣ ಪಥ ಯೋಜನೆಯ ಪ್ರಾರಂಭೋತ್ಸವಕ್ಕೆ ಜೇವರ್ಗಿಯಲ್ಲಿ ಸರ್ಕಾರ ಚಾಲನೆ**

**೨. ೧೬ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಇಂದು ತೆರೆ ; ಹಿರಿಯ ನಟಿ ಶಬಾನ ಅಜ್ಮಿಗೆ ಕರ್ನಾಟಕ ಚಲನಚಿತ್ರ ಅಕಾಡೆಮಿಯ ಜೀವಮಾನ ಸಾಧನೆ ಪ್ರಶಸ್ತಿ**

**೩. ಪರಿಶಿಷ್ಟರ ಹಣ ಅನ್ಯ ಉದ್ದೇಶಕ್ಕೆ ಬಳಕೆ ಆರೋಪ - ಸರ್ಕಾರದ ವಿರುದ್ಧ ಜನಾಂದೋಲನಕ್ಕೆ ಸಂಘಟನೆಗಳ ನಿರ್ಧಾರ**

**೪. ಇಂದು ಅಂತಾರಾಷ್ಟ್ರೀಯ ಮಹಿಳಾ ದಿನ ; ಮಹಿಳೆಯರ ಸಬಲೀಕರಣಕ್ಕೆ ಒತ್ತು ನೀಡಲು ಕರೆ**

**೫. ಅಕ್ರಮ ಚಿನ್ನ ಕಳ್ಳ ಸಾಗಾಣೆ ಪ್ರಕರಣ ; ಸಿಬಿಐನಿಂದ ನಟಿ ರನ್ಯಾರಾವ್ ವಿರುದ್ಧ ಎಫ್ಐಆರ್ ದಾಖಲು**

**<><*<><>*><>**

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಹಯೋಗದಲ್ಲಿ ಜೇವರ್ಗಿಯಲ್ಲಿ ಇಂದು "ಕಲ್ಯಾಣ ಪಥ" ಯೋಜನೆಯ ಪ್ರಾರಂಭೋತ್ಸವಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಚಾಲನೆ ನೀಡಿದರು. ಕಲ್ಯಾಣ ಕರ್ನಾಟಕದಲ್ಲಿ ಒಂದು ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ೧ ಸಾವಿರದ ೧೧೬ ಕಿಲೋಮೀಟರ್ ರಸ್ತೆ ಅಭಿವೃದ್ಧಿ ಪಡಿಸಲಾಗುತ್ತಿದೆ. ಅಲ್ಲದೇ ಅಕ್ಷರ ಆವಿಷ್ಕಾರ, ಆರೋಗ್ಯ ಆವಿಷ್ಕಾರ, ಉದ್ಯೋಗ ಆವಿಷ್ಕಾರ ಸೇರಿದಂತೆ ಹಲವು ಯೋಜನೆಗಳಿಗೆ ಚಾಲನೆ ನೀಡಲಾಯಿತು.

**<><*<><>*><>**

ಬೆಂಗಳೂರಿನಲ್ಲಿ ಆಯೋಜಿಸಿರುವ ೧೬ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಪ್ರಶಸ್ತಿ ಪ್ರದಾನ ಹಾಗೂ ಸಮಾರೋಪ ಸಮಾರಂಭ ಇಂದು ನಡೆಯಲಿದೆ. ಈ ಬಾರಿಯ ಜೀವಮಾನ ಸಾಧನೆ ಪ್ರಶಸ್ತಿಗೆ ಭಾರತೀಯ ಚಿತ್ರರಂಗದ ಮೇರು ನಟಿ, ಬಹುಭಾಷಾ ಕಲಾವಿದೆ ಶಬಾನಾ ಅಜ್ಮಿ ಆಯ್ಕೆಯಾಗಿದ್ದಾರೆ.  ಸಾಮಾಜಿಕ ಜಾಲ ತಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಶಬಾನಾ ಆಜ್ಮಿ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.  ದಕ್ಷಿಣ ಭಾರತದ ಚಿತ್ರಗಳು ಹಾಗೂ ಹಿಂದಿ ಭಾಷೆಯ ಚಲನಚಿತ್ರಗಳಲ್ಲಿ ನಟಿಸಿ, ಸೈ ಎನಿಸಿಕೊಂಡವರು. ಸುಮಾರು ೫೦ ವರ್ಷಗಳ ಅವರ ಕಲಾಸೇವೆಗೆ ಸಂದ ಈ ಗೌರವವು ಪ್ರಶಸ್ತಿಯ ಘನತೆಯನ್ನು ಹೆಚ್ಚಿಸಿದೆ ಎಂದು ಹೇಳಿದ್ದಾರೆ.  ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿಯು ಈ ಪ್ರಶಸ್ತಿ ನೀಡಿ ಗೌರವಿಸುತ್ತಿದ್ದು, ಪ್ರಶಸ್ತಿಯು ೧೦ ಲಕ್ಷ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ.

<><*<><>*><>

ಪರಿಶಿಷ್ಟರ ಹಣ ಅನ್ಯ ಉದ್ದೇಶಕ್ಕೆ ಬಳಸುತ್ತಿರುವ ಸರ್ಕಾರದ ವಿರುದ್ಧ ಜನಾಂದೋಲನ ರೂಪಿಸಲಾಗುವುದು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನ ಶಾಸಕರ ಭವನದಲ್ಲಿ ಇಂದು ಪರಿಶಿಷ್ಟ ಸಂಘಟನೆಗಳೊಂದಗಿನ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಘಟನೆಗಳು ಇದಕ್ಕಾಗಿ ೧೦ ತಂಡಗಳನ್ನು ರಚಿಸಲಾಗಿದೆ. ಇನ್ನೊಂದು ವಾರದ ಒಳಗೆ ರಾಜ್ಯಾದ್ಯಂತ ಪ್ರವಾಸ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಸಭೆಯಲ್ಲಿ ಸಂಸದ ಗೋವಿಂದ ಕಾರಜೋಳ, ಕೇಂದ್ರದ ಮಾಜಿ ಸಚಿವ ಎ. ನಾರಾಯಣಸ್ವಾಮಿ, ರಾಜ್ಯ ಉಪಾಧ್ಯಕ್ಷ ಕೊಳ್ಳೇಗಾಲ ಮಹೇಶ್, ದಲಿತ ಸಂಘಟನೆಗಳ ಪ್ರಮುಖರು ಸಭೆಯಲ್ಲಿ ಭಾಗವಹಿಸಿದ್ದರು.

<><*<><>*><>

ರಾಜ್ಯ ಬಜೆಟ್ ಅಲ್ಪ ಸಂಖ್ಯಾತರಿಗಾಗಿ ಮಾಡಿರುವ ಬಜೆಟ್ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ದೂರಿದ್ದಾರೆ. ಹುಬ್ಬಳ್ಳಿಯಲ್ಲಿಂದು  ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ‘ಸಬ್ ಕಾ ಸಾಥ್ ಸಬ್ ಕಾ ವಿಕಾಸ್’ ಅಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಆಯವ್ಯಯ ಒಂದೇ ಸಮುದಾಯದ ಬಜೆಟ್ ಎಂದು ತಿಳಿಸಿದ್ದಾರೆ.

<><*<><>*><>

ಕೊಪ್ಪಳ ಜಿಲ್ಲೆ ಗಂಗಾವತಿ ತಾಲೂಕಿನ ಸಾಣಾಪುರದಲ್ಲಿ ಇಸ್ರೇಲ್ ಪ್ರಜೆ ಹಾಗೂ ಹೋಂಸ್ಟೇ ಮಾಲಿಕರ ಮೇಲೆ ನಡೆದ ಹಲ್ಲೆ ಹಾಗೂ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು

ಆರೋಪಿಗಳನ್ನು ಬಂಧಿಸಲಾಗಿದೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅಪರಾಧಿಗಳನ್ನು ಶೀಘ್ರವೇ ಪತ್ತೆ ಹಚ್ಚುವಂತೆ ಸೂಚಿಸಲಾಗಿದ್ದು, ಪೊಲೀಸರು ಇಬ್ಬರೂ ಆರೋಪಿಗಳನ್ನು ಬಂಧಿಸಿ ತನಿಖೆ ಮುಂದುವರಿಸಿದ್ದಾರೆ. ರಾಜ್ಯಕ್ಕೆ ಬರುವ ಪ್ರವಾಸಿಗರು ಸೇರಿದಂತೆ ಪ್ರತಿಯೊಬ್ಬರಿಗೂ ರಕ್ಷಣೆ ನೀಡಲು ಸರ್ಕಾರ ಬದ್ಧ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

**<><*<><>*><>**

ಸರಕಾರದ ನಿರ್ದೇಶನದಂತೆ ನಾಳೆ  ಧಾರವಾಡ ನಗರದ ಕೆಸಿಡಿ ಆವರಣದಲ್ಲಿ ಕೌಶಲ್ಯ ರೋಜ್ ಗಾರ - ಉದ್ಯೋಗಮೇಳವನ್ನು ಹಮ್ಮಿಕೋಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಧಾರವಾಡದ ಕೆಸಿಡಿ ಆವರಣದಲ್ಲಿ ಉದ್ಯೋಗಮೇಳದ ಸಿದ್ದತೆ ಪರಿಶೀಲಿಸಿ ಮಾತನಾಡಿದ ಅವರು, ಇಲ್ಲಿಯವರೆಗೆ ನಾಲ್ಕು ಸಾವಿರ ಜನ ಉದ್ಯೋಗ ಆಕಾಂಕ್ಷಿಗಳು ಆನ್ ಲೈನ್ ನೋಂದಣಿ ಪಡೆದಿದ್ದಾರೆ. ನಾಳೆ ಸ್ಥಳದಲ್ಲಿಯೇ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡು ಸಂದರ್ಶನಕ್ಕೆ ಹಾಜರಾಗಲು ಅವಕಾಶ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಜಿಲ್ಲಾಧಿಕಾರಿ ದಿವ್ಯಪ್ರಭು**

**<><*<><>*><>**

ಪಂಚಾಯಿತಿಯಿಂದ ಸಂಸತ್ತಿನವರೆಗೂ ಹೆಣ್ಣು ಮಕ್ಕಳಿಗೆ ಮೀಸಲಾತಿ ಕಲ್ಪಿಸಲಾಗಿದ್ದು, ಮುಂದಿನ ದಿನದಲ್ಲಿ ವಿಧಾನಸಭೆ ಮತ್ತು ಲೋಕಸಭೆಯಲ್ಲಿ ಮಹಿಳೆಯರಿಗೆ ಶೇಕಡ ೩೩ ರಷ್ಟು  ಮೀಸಲಾತಿ ಸಿಗಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.  ಕಲಬುರಗಿಯಲ್ಲಿ ನಡೆದ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮಹಿಳೆಯರ ಉನ್ನತಿಯನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.  ಮಹಿಳೆಯರಿಗೆ ಅವಕಾಶ ನೀಡಿದರೆ ಮಾತ್ರ ದೇಶದ ಸಮಗ್ರ ಅಭಿವೃದ್ಧಿ ತ್ವರಿತಗೊಳಿಸಲು ಸಾಧ್ಯ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ  ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಅಭಿಪ್ರಾಯಪಟ್ಟಿದ್ದಾರೆ.  ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ  ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಳಾ ವಿಶ್ವವಿದ್ಯಾನಿಲಯ ಕೇವಲ ಶಿಕ್ಷಣ ನೀಡುವ ಕೇಂದ್ರವಷ್ಟೇ ಅಲ್ಲ, ಮಹಿಳೆಯರಲ್ಲಿ ಆತ್ಮವಿಶ್ವಾಸ, ಸ್ವಾಯತ್ತತೆ ಮತ್ತು ನಾಯಕತ್ವ ಗುಣಗಳನ್ನು ವೃದ್ಧಿಸಲು ಸಹಾಯ ಮಾಡಲಿದೆ ಎಂದು ತಿಳಿಸಿದ್ದಾರೆ. ಮಹಿಳೆ ಎನ್ನುವ ಪದವೇ ಸ್ಫೂರ್ತಿಯ ಸಂಕೇತ ಎಂದು ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಆಯುಕ್ತೆ ಮಂಜುಳಾ ತಿಳಿಸಿದ್ದಾರೆ.

ಮಹಿಳಾ ದಿನಾಚರಣೆ ಅಂಗವಾಗಿ ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಭೂಮಿಯಿಂದ ಆಕಾಶದವರೆಗೂ ಉನ್ನತ ಹುದ್ದೆಯನ್ನು ಮಹಿಳೆಯರು ಹೊಂದಿದ್ದಾರೆ ಎಂದು ಹೇಳಿದರು.

**ಧ್ವನಿ : ಸ್ಕೌಟ್ಸ್ ಅಂಡ್ ಗೈಡ್ಸ್ ಆಯುಕ್ತೆ ಮಂಜುಳಾ**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಶ್ರೀ ರಾಮ ಸಮೂಹ ವಿದ್ಯಾಸಂಸ್ಥೆಗಳ ಆಶ್ರಯದಲ್ಲಿ ಇಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಸಮಾನತೆ, ಪ್ರಗತಿ, ಸೇರ್ಪಡೆಯೊಂದಿಗೆ ಪ್ರತಿಯೊಬ್ಬ ಮಹಿಳೆಯನ್ನು ಸಬಲೀಕರಣಗೊಳಿಸಸುವ ಧ್ಯೇಯ ವಾಕ್ಯದಡಿ ಆಚರಿಸಲಾಯಿತು. ದೇಶಕ್ಕೆ ಮಹಿಳೆಯರ ಕೊಡುಗೆ ಅಪಾರವಾಗಿದ್ದು, ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ತಮ್ಮ ಛಾಪನ್ನು ಮೂಡಿಸಿದ್ದಾರೆ ಎಂದು ಕೋಲಾರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎ.ಮಂಜುನಾಥ್ ತಿಳಿಸಿದ್ದಾರೆ. ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಮತ್ತು ರೀಡ್ಸ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಬಳ್ಳಾರಿಯಲ್ಲಿಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಮ್ಮಿಕೊಳ್ಳಲಾಗಿತ್ತು. ಪ್ರತಿಯೊಂದು ಮಹಿಳೆಯೂ ನಿಮಗೆ ನೀವೇ ನಿಮ್ಮ ಆತ್ಮ ಸ್ಥೈರ್ಯ ವೃದ್ಧಿಸಿಕೊಳ್ಳಿ, ಅತ್ತೆ, ಸೊಸೆ ಎಂದು ಬೇಧ ಭಾವ ಮಾಡದೇ ಕೌಟಂಬಿಕ ಸಾಮರಸ್ಯವನ್ನು ಕಾಪಾಡಿಕೊಳ್ಳಿ ಎಂದು ಹಾಸನ ಜಿಲ್ಲಾಧಿಕಾರಿ ಸತ್ಯಭಾಮ ಕರೆ ನೀಡಿದ್ದಾರೆ. ವಿಜಯಪುರದಲ್ಲಿಯೂ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮಹಿಳೆಯರು ಹಿಂಜರಿಕೆಯನ್ನು ತೊರೆದು ಆತ್ಮಸ್ಥೈರ್ಯದಿಂದ ವಿವಿಧ ಕ್ಷೇತ್ರಗಳಲ್ಲಿ ಮುನ್ನುಗ್ಗಿದರೆ ಸಾಧನೆ ಸಾಧ್ಯ ಎಂದು ಚಿಕ್ಕಬಳ್ಳಾಪುರ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ತಿಳಿಸಿದ್ದಾರೆ. ತುಮಕೂರು ನಗರದ ಮಹಾತ್ಮಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಕ್ರೀಡಾಸ್ಪರ್ಧೆಗಳಿಗೆ ಮಾಜಿ ಉಪಮೇಯರ್ ರೂಪಾ ಶೆಟ್ಟಾಳಯ್ಯ ಚಾಲನೆ ನೀಡಿದರು. ನೆಹರು ಯುವ ಕೇಂದ್ರದ ವತಿಯಿಂದ ಗದಗ ನಗರದ ಎಂ ಬಿ ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಯಿತು.

**<><*<><>*><>**

ನಟಿ ರನ್ಯಾರಾವ್ ಅಕ್ರಮ ಚಿನ್ನ, ಕಳ್ಳ ಸಾಗಾಣೆ ಪ್ರಕರಣದ ತನಿಖೆಯನ್ನು ಸಿಬಿಐ ಆರಂಭಿಸಿದ್ದು, ಕಂದಾಯ ಗುಪ್ತಚರ ನಿರ್ದೇಶಾನಲಯದ ಮಾಹಿತಿ ಆಧಾರದ ಮೇಲೆ ಎಫ್ಐಆರ್ ದಾಖಲಿಸಿದೆ. ಈ ಪ್ರಕರಣದಲ್ಲಿ ಇನ್ನು ಹೆಚ್ಚಿನ ವ್ಯಕ್ತಿಗಳು ಭಾಗಿಯಾಗಿರುವ ಹಿನ್ನೆಲೆಯಲ್ಲಿ ಸಿಬಿಐ ತನಿಖೆ ಆರಂಭಿಸಿದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ತಿಳಿಸಿದೆ. ಮಾರ್ಚ್ ೪ರಂದು ಬೆಂಗಳೂರಿನ

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಟಿಯನ್ನು ಬಂಧಿಸಲಾಗಿದ್ದು, ಈ ಸಂದರ್ಭದಲ್ಲಿ ಆಕೆಯಿಂದ ೧೪.೮ ಕೆ.ಜಿ. ಚಿನ್ನಾಭರಣ ವಶಪಡಿಸಿಕೊಳ್ಳಲಾಗಿದೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನ್ಯಾಯಾಲಯಗಳಲ್ಲಿ ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಅದಾಲತ್‌ನಲ್ಲಿ ನಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು, ವಿವಿಧ ಪೂರ್ವ ದಾವೆ ಹಲವಾರು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**